ಸಂಖ್ಯೆ: ಪ್ರಮುಅಸಂ.ಮಾಪಹಅ.ವಿವ.1 /2005-06

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯವರ ಕಛೇರಿ
ಅರಣ್ಯ ಭವನ, ಮಲ್ಲೇಶ್ವರಂ,
ಬೆಂಗಳೂರು-3, ದಿನಾಂಕ: 21.09.2005.

# ಅಧಿಸೂಚನೆ

ವಿಷಯ: ಮಾಹಿತಿ ಪಡೆಯುವ ಹಕ್ಕು ಅಧಿನಿಯಮ 2005ರಡಿಯಲ್ಲಿ ಕರ್ನಾಟಕ ಅರಣ್ಯ ಇಲಾಖೆಯ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ನೇಮಕ – ಈ ಕುರಿತು.

ಉಲ್ಲೇಖ: ಪ್ರಧಾನ ಮುಖ್ಯ ಅರಣ್ಯ ಸಂಥಕ್ಷಣಾಧಿಕಾರಿಗಳನ್ನು ಸಾರ್ವಜನಿಕ ಅಧಿಕಾರಿ ಎಂದು ನೇಮಕ ಮಾಡಿದ ಸರಕಾರದ ದಿನಾಂಕ ಎಫ್‌ಇ 37 ಎಫ್‌ಡಿಸಿ 2005ರ ಅಧಿಸೂಚನೆ.

**

ಮಾಹಿತಿ ಪಡೆಯುವ ಹಕ್ಕು ಅಧಿನಿಯಮ 2005ರ ಪ್ರಕರಣ 5(1)ರ ಮೇರೆಗೆ ನನ್ನಲ್ಲಿ ನಿಹಿತವಾದ ಅಧಿಕಾರದ ಮೇರೆಗೆ ಕರ್ನಾಟಕ ಅರಣ್ಯ ಇಲಾಖೆಯ "ಸಾರ್ವಜನಿಕ ಪ್ರಾಧಿಕಾರಿ" ಯಾದ ಈ ಕೆಳಗೆ ಸಹಿ ಹಾಕಿದ ನಾನು ಈ ಕೆಳಗಿನ ಅಧಿಕಾರಿಗಳನ್ನು ಕರ್ನಾಟಕ ಅರಣ್ಯ ಇಲಾಖೆಯ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನಾಗಿ ಈ ಮೂಲಕ ನೇಮಕ ಮಾಡಿದ್ದೇನೆ. ಆಯಾಯ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ನಿಕಟ ಹಿರಿಯ ಅಧಿಕಾರಿಗಳನ್ನು (ಪ್ರಥಮ ಮೇಲ್ಮನವಿ ಸಲ್ಲಿಸುವ ಬಗ್ಗೆ) ಅವರವರ ಹೆಸರಿನ ಎದುರು ನಮೂದಿಸಲಾಗಿದೆ.

| ಕ್ರ ಸಂ | ಪದನಾಮ | ಅಧಿಕಾರ ವ್ಯಾಪ್ತಿ | ಮೇಲ್ಮನವಿ ಅಧಿಕಾರಿ |
|---|---|---|---|
| 1. | ಎಲ್ಲಾ ಉಪ ವಿಭಾಗಗಳ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು | ಅವರವರ ಉಪ ವಿಭಾಗಗಳು | ಸಂಬಂಫಪಟ್ಟ ಉಪ ಅರಣ್ಯ ಸಂರಕ್ಷಣಾಧಿಕಾರಿ |
| 2. | ಎಲ್ಲಾ ಪ್ರಾದೇಶಿಕ ವಿಭಾಗ ಉಪ ಅರಣ್ಯ ಸಂರಕ್ಷಣಾಧಿರಿ | ಅವರವರ ವಿಭಾಗಗಳು | ಸಂಬಂಧಪಟ್ಟ ಅರಣ್ಯ ಸಂರಕ್ಷಣಾಧಿಕಾರಿ |
| 3. | ಎಲ್ಲಾ ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು | ಅವರವರ ವಿಭಾಗಗಳು | ಸಂಬಂಧಪಟ್ಟ ಅರಣ್ಯ ಸಂರಕ್ಷಣಾಧಿಕಾರಿ. |
| 4. | ಎಲ್ಲಾ ಅರಣ್ಯ ಸಂಚಾರಿದಳದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು | ಅವರವರ ಕಾರ್ಯ ವ್ಯಾಪ್ತಿಯ ಪ್ರದೇಶ | ಸಂಬಂಧಪಟ್ಟ ಅರಣ್ಯ ಸಂರಕ್ಷಣಾಧಿಕಾರಿ. |
| 5. | ಎಲ್ಲಾ ಪ್ರಾದೇಶಿಕ ವೃತ್ತಗಳು, ಅರಣ್ಯ ಸಂರಕ್ಷಣಾಧಿಕಾರಿಗಳು | ಅವರವರ ವೃತ್ತಗಳು | ವಿಷಯವು ಯಾರಿಗೆ ಅನ್ವಯ ವಾಗುತ್ತದೆಯೊ ಅಂತಹ ಮುಖ್ಯ |

| | | | |
|---|---|---|---|
| | | | ಅರಣ್ಯ ಸಂರಕ್ಷಣಾಧಿಕಾರಿ/ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ / ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ |
| 6. | ಎಲ್ಲಾ ಸಂಶೋಧನ ಅರಣ್ಯ ಸಂರಕ್ಷಣಾಧಿಕಾರಿಗಳು. | ಅವರವರ ಕಾರ್ಯ ವ್ಯಾಪ್ತಿಯ ಪ್ರದೇಶ | ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಅರಣ್ಯ ಸಂಶೋಧನೆ ಮತ್ತು ತರಬೇತಿ ಕೇಂದ್ರ). |
| 7. | ಎಲ್ಲಾ ಕಾರ್ಯಯೋಜನೆ ಅರಣ್ಯ ಸಂರಕ್ಷಣಾಧಿಕಾರಿಗಳು | ಅವರವರ ಕಾರ್ಯ ವ್ಯಾಪ್ತಿಯ ಪ್ರದೇಶ | ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಯೋಜನೆ(ಕಾರ್ಯ ಯೋಜನೆ). |
| 8. | ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಸಂಪರ್ಕ ಮತ್ತು ಮಾಹಿತಿ) | ಇಲಾಖೆಯ ಮಾಹಿತಿಗಳ ಗಣಕೀಕರಣ | ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಸಿಬ್ಬಂದಿ ಮತ್ತು ಆಡಳಿತ) |
| 9 | ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅಭಿವೃದ್ಧಿ) | ರಾಜ್ಯ ಮಟ್ಟದ ಎಲ್ಲಾ ಯೋಜನೆಗಳು | ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಸಿಬ್ಬಂದಿ ಮತ್ತು ಆಡಳಿತ) |
| 10. | ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಸಾಮಾಜಿಕ ಅರಣ್ಯ) | ರಾಜ್ಯ ಮಟ್ಟದ ಜೆಬಿಐಸಿ ಯೋಜನೆ | ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಸಿಬ್ಬಂದಿ ಮತ್ತು ಆಡಳಿತ) |
| 11. | ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಜಾಗೃತ) | ರಾಜ್ಯ ಮಟ್ಟದ ಜಾಗೃತಿಯ ಕಾರ್ಯ | ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಸಿಬ್ಬಂದಿ ಮತ್ತು ಆಡಳಿತ) |
| 12. | ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಪಶ್ಚಿಮ ಘಟ್ಟ) | ರಾಜ್ಯ ಮಟ್ಟದಲ್ಲಿ ಡಬ್ಲ್ಯೂಜಿ ಮತ್ತು ಆರ್‌ಐಡಿಎಫ್ ಯೋಜನೆ | ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಸಿಬ್ಬಂದಿ ಮತ್ತು ಆಡಳಿತ) |
| 13 | ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಸಂಶೋಧನೆ ಮತ್ತು ತರಬೇತಿ ಸಂಸ್ಥೆ) | ರಾಜ್ಯ ಮಟ್ಟದಲ್ಲಿ ಎಲ್ಲಾ ಸಂಶೋಧನೆ ಮತ್ತು ತರಬೇತಿಯ ಕಾರ್ಯಕ್ರಮಗಳು | ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮೌಲ್ಯಮಾಪನ, ಕಾರ್ಯಯೋಜನೆ, ಸಂಶೋಧನೆ ಮತ್ತು ತರಬೇತಿ) |
| 14. | ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಕಾರ್ಯಯೋಜನೆ) | ರಾಜ್ಯ ಮಟ್ಟದಲ್ಲಿ ಕಾರ್ಯಯೋಜನೆಯ ಕಾರ್ಯಕ್ರಮಗಳು | ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮೌಲ್ಯಮಾಪನ, ಕಾರ್ಯಯೋಜನೆ, ಸಂಶೋಧನೆ ಮತ್ತು ತರಬೇತಿ) |

| | | | |
|---|---|---|---|
| 15 | ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ(ರಕ್ಷಣೆ ಮತ್ತು ನಿರ್ವಹಣೆ) | ರಾಜ್ಯ ಮಟ್ಟದಲ್ಲಿ ಅರಣ್ಯ ಸಂಪನ್ಮೂಲಗಳ ನಿರ್ವಹಣೆ ಖಾಸಗಿ ಮರಗಳ ನಿಯಂತ್ರಣ | ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮೌಲ್ಯಮಾಪನ, ಕಾರ್ಯಯೋಜನೆ, ಸಂಶೋಧನೆ ಮತ್ತು ತರಬೇತಿ) |
| 16 | ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಸಮನ್ವಯ ಅಧಿಕಾರಿ | ರಾಜ್ಯ ಮಟ್ಟದಲ್ಲಿ ಅರಣ್ಯ ಸಂರಕ್ಷಣೆಯ ಪ್ರಕರಣಗಳು | ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ |
| 17 | ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಸಿಬ್ಬಂದಿ ಮತ್ತು ಆಡಳಿತ) | ರಾಜ್ಯ ಮಟ್ಟದಲ್ಲಿ ಸಿಬ್ಬಂದಿ ವಿಷಯಗಳು | ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ |
| 18 | ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮೌಲ್ಯಮಾಪನ, ಕಾರ್ಯಯೋಜನೆ, ಸಂಶೋಧನೆ ಮತ್ತು ತರಬೇತಿ) | ಮೌಲ್ಯಮಾಪನ, ಕಾರ್ಯಯೋಜನೆ, ಸಂಶೋಧನೆ ಮತ್ತು ತರಬೇತಿ ಸಂಬಂಧಿ ರಾಜ್ಯ ಮಟ್ಟದಲ್ಲಿ ಧೋರಣಾತ್ಮಕ ವಿಷಯಗಳು | ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ |
| 19. | ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಮತ್ತು ಮುಖ್ಯ ವನ್ಯಜೀವಿ ವಾರ್ಡನ್ | ರಾಜ್ಯ ಮಟ್ಟದಲ್ಲಿ ವನ್ಯಜೀವಿ ವಿಷಯಗಳು | ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ |

ಅಲ್ಲದೇ, ಮಾಹಿತಿ ಪಡೆಯುವ ಹಕ್ಕು ಅಧಿನಿಯಮ 5(2)ರ ಮೇರೆಗೆ ನನ್ನಲ್ಲಿ ನಿಹಿತವಾದ ಅಧಿಕಾರದ ಮೇರೆಗೆ, ಈ ಕೆಳಗೆ ಸಹಿ ಹಾಕಿದ ಕರ್ನಾಟಕ ಅರಣ್ಯ ಇಲಾಖೆಯ "ಸಾರ್ವಜನಿಕ ಪ್ರಾಧಿಕಾರಿ" ಯಾದ ನಾನು ಕರ್ನಾಟಕ ಅರಣ್ಯ ಇಲಾಖೆಯ ಎಲ್ಲಾ ವಲಯ ಅರಣ್ಯಾಧಿಕಾರಿಗಳನ್ನು ಅವರವರ ಕಾರ್ಯಕ್ಷೇತ್ರದಲ್ಲಿ ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನಾಗಿ ಈ ಮೂಲಕ ನೇಮಕ ಮಾಡಲಾಗಿದೆ. ಈ ಅಧಿಕಾರಿಗಳು ಯಾವುದೇ ಮಾಹಿತಿಯ ಬಗ್ಗೆ ಅರ್ಜಿ ಅಥವಾ ಮೇಲ್ಮನವಿಗಳನ್ನು ಸ್ವೀಕರಿಸಿ ಅದನ್ನು ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ರವಾನಿಸತಕ್ಕದ್ದು.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ.

**ಪ್ರತಿಗಳು:**

1. ಮೇಲೆ ಹೆಸರಿಸಿದ ಎಲ್ಲಾ ಅಧಿಕಾರಿಗಳಿಗೆ.
2. ಅರಣ್ಯ ಇಲಾಖೆಯ ವ್ಯಾಪ್ತಿಯೊಳಗೆ ಸೇವೆ ಸಲ್ಲಿಸುತ್ತಿರುವ ವಲಯ ಅರಣ್ಯಾಧಿಕಾರಿಗಳಿಗೆ.

**ಪ್ರತಿಗಳು ಆದರಗಳೊಂದಿಗೆ:**

1. ಮಾನ್ಯ ಅರಣ್ಯ, ಪರಿಸರ ಮತ್ತು ಜೀವ ಪರಿಸ್ಥಿತಿ ಶಾಸ್ತ್ರ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ.
2. ರಾಜ್ಯ ಮಾಹಿತಿ ಆಯುಕ್ತರು, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ.

**ಕಛೇರಿಯ ಸೂಚನಾ ಫಲಕಕ್ಕೆ ಪ್ರತಿ.**

ಸಂಖ್ಯೆಃ ಪ್ರಮುಅಸಂ.ಮಾಪಹಅ.ವಿವ.1 /2005-06

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯವರ ಕಛೇರಿ
ಅರಣ್ಯ ಭವನ, ಮಲ್ಲೇಶ್ವರಂ,
ಬೆಂಗಳೂರು-3, ದಿನಾಂಕಃ 15 12.2005.

## ಅಧಿಸೂಚನೆ

ವಿಷಯಃ ಮಾಹಿತಿ ಪಡೆಯುವ ಹಕ್ಕು ಅಧಿನಿಯಮ 2005ರಡಿಯಲ್ಲಿ ಕರ್ನಾಟಕ ಅರಣ್ಯ ಇಲಾಖೆಯ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ನೇಮಕ – ಈ ಕುರಿತು.

ಉಲ್ಲೇಖಃ
1. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳನ್ನು ಸಾರ್ವಜನಿಕ ಅಧಿಕಾರಿ ಎಂದು ನೇಮಕ ಮಾಡಿದ ಸರಕಾರದ ದಿನಾಂಕ ಎಫ್‌ಇ 37 ಎಫ್‌ಡಿಸಿ 2005ರ ಅಧಿಸೂಚನೆ.
2. ಈ ಕಛೇರಿಯ ದಿನಾಂಕ 21.9.2005ರ ಸಮಸಂಖ್ಯೆಯ ಅಧಿಸೂಚನೆ.

**

ಈ ಕಛೇರಿಯ ಉಲ್ಲೇಖ (2)ರ ಅಧಿಸೂಚನೆಗೆ ಮುಂದುವರಿಕೆಯಾಗಿ ಮತ್ತು ಮಾಹಿತಿ ಪಡೆಯುವ ಹಕ್ಕು ಅಧಿನಿಯಮ 2005ರ ಪ್ರಕರಣ 5(1)ರ ಮೇರೆಗೆ ನನ್ನಲ್ಲಿ ನಿಹಿತವಾದ ಅಧಿಕಾರದ ಮೇರೆಗೆ ಕರ್ನಾಟಕ ಅರಣ್ಯ ಇಲಾಖೆಯ "ಸಾರ್ವಜನಿಕ ಪ್ರಾಧಿಕಾರಿ" ಯಾದ ಈ ಕೆಳಗೆ ಸಹಿ ಹಾಕಿದ ನಾನು ಈ ಕೆಳಗಿನ ಹೆಚ್ಚಿನ ಅಧಿಕಾರಿಗಳನ್ನು ಕರ್ನಾಟಕ ಅರಣ್ಯ ಇಲಾಖೆಯ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನಾಗಿ ಈ ಮೂಲಕ ನೇಮಕ ಮಾಡಿದ್ದೇನೆ. ಆಯಾಯ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ನಿಕಟ ಹಿರಿಯ ಅಧಿಕಾರಿಗಳನ್ನು (ಪ್ರಥಮ ಮೇಲ್ಮನವಿ ಸಲ್ಲಿಸುವ ಬಗ್ಗೆ) ಅವರವರ ಹೆಸರಿನ ಎದುರು ನಮೂದಿಸಲಾಗಿದೆ.

ಮಾಹಿತಿ ಪಡೆಯುವ ಹಕ್ಕು ಅಧಿನಿಯಮ 2005ರಡಿಯಲ್ಲಿ ಕರ್ನಾಟಕ ಅರಣ್ಯ ಇಲಾಖೆಯ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನು ಈ ಕೆಳಕಂಡಂತೆ ನೇಮಕ ಮಾಡಲಾಗಿದೆ.

| ಕ್ರ ಸಂ | ಪದನಾಮ | ಅಧಿಕಾರ ವ್ಯಾಪ್ತಿ | ಮೇಲ್ಮನವಿ ಅಧಿಕಾರಿ |
|---|---|---|---|
| 1. | ಎಲ್ಲಾ ಅರಣ್ಯ ಸಂಚಾರಿದಳದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು (ಸ್ವತಂತ್ರ ಪ್ರಭಾರ) | ಅವರವರ ಕಾರ್ಯ ವ್ಯಾಪ್ತಿಯ ಪ್ರದೇಶ | ಸಂಬಂಧಪಟ್ಟ ಉಪ ಅರಣ್ಯ ಸಂರಕ್ಷಣಾಧಿಕಾರಿ / ಅರಣ್ಯ ಸಂರಕ್ಷಣಾಧಿಕಾರಿ. |
| 2. | ವನ್ಯಜೀವಿ ಸ್ವತಂತ್ರ ಘಟಕದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು | ಅವರವರ ಕಾರ್ಯ ವ್ಯಾಪ್ತಿಯ ಪ್ರದೇಶ | ಸಂಬಂಧಪಟ್ಟ ಪ್ರಾದೇಶಿಕ ಅರಣ್ಯ ಸಂರಕ್ಷಣಾಧಿಕಾರಿ. |
| 3. | ಅರಣ್ಯ ಕೃಷಿಕಾಧಿಕಾರಿಗಳು, ಬೆಂಗಳೂರು, ಬಳ್ಳಾರಿ, ಧಾರವಾಡ, ಮಡಿಕೇರಿ. | ಅವರವರ ಕಾರ್ಯ ವ್ಯಾಪ್ತಿಯ ಪ್ರದೇಶ | ಅರಣ್ಯ ಸಂರಕ್ಷಣಾಧಿಕಾರಿ, ಸಂಶೋಧನೆ ವೃತ್ತ. |
| 4. | ಉಪ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ತಾಂತ್ರಿಕ ಮತ್ತು ಆಡಳಿತ ತರಬೇತಿ ಸಂಸ್ಥೆ, ಕಾಡುಗೋಡಿ. | ಅವರ ಕಾರ್ಯ ವ್ಯಾಪ್ತಿಯ ವಿಷಯ | ಅರಣ್ಯ ಸಂರಕ್ಷಣಾಧಿಕಾರಿ, ತರಬೇತಿ ಮತ್ತು ಪರಿಸರ ಪ್ರವಾಸೋದ್ಯಮ |

| | | | |
|---|---|---|---|
| 5. | ಅರಣ್ಯ ಸಂರಕ್ಷಣಾಧಿಕಾರಿ, ತರಬೇತಿ ಮತ್ತು ಪರಿಸರ ಪ್ರವಾಸೋದ್ಯಮ (ಧಾರವಾಡ). | ಅವರ ಕಾರ್ಯ ವ್ಯಾಪ್ತಿಯ ವಿಷಯ | ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಸಂಶೋಧನೆ ಮತ್ತು ತರಬೇತಿ ಸಂಸ್ಥೆ) |

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ.

**ಪ್ರತಿಗಳು:**

1. ಮೇಲೆ ಹೆಸರಿಸಿದ ಎಲ್ಲಾ ಅಧಿಕಾರಿಗಳಿಗೆ.
2. ಅರಣ್ಯ ಇಲಾಖೆಯ ವ್ಯಾಪ್ತಿಯೊಳಗೆ ಸೇವೆ ಸಲ್ಲಿಸುತ್ತಿರುವ ವಲಯ ಅರಣ್ಯಾಧಿಕಾರಿಗಳಿಗೆ.

**ಪ್ರತಿಗಳು ಆದರಗಳೊಂದಿಗೆ:**

1. ಮಾನ್ಯ ಅರಣ್ಯ, ಪರಿಸರ ಮತ್ತು ಜೀವ ಪರಿಸ್ಥಿತಿ ಶಾಸ್ತ್ರ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ.
2. ರಾಜ್ಯ ಮಾಹಿತಿ ಆಯುಕ್ತರು, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ.

**ಕಛೇರಿಯ ಸೂಚನಾ ಫಲಕಕ್ಕೆ ಪ್ರತಿ.**

15/12/2005